# ಮಂಗಳೂರು ವಿಶ್ವವಿದ್ಯಾನಿಲಯ

ಸಂ.ಮಂವಿ/ಸಾವಿ/ರಾಜ್ಯ ವಿ.ವೇತನ/2021–22/ಜಿ6

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ–574199
ದಿನಾಂಕ: 19.11.2021

## <u>ಸುತ್ತೋಲೆ</u>

ವಿಷಯ: ಕರ್ನಾಟಕ ರಾಜ್ಯದ ಎಲ್ಲಾ ವರ್ಗದ ರೈತರ ಮಕ್ಕಳು ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ (State Scholarship Portal-SSP) ನಲ್ಲಿ ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನಕ್ಕೆ ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ :ಇಡಿ/35/ಇಜಿಒವಿ/2021 ದಿನಾಂಕ 04.11.2021.

*****

ಕರ್ನಾಟಕ ರಾಜ್ಯದ ಎಲ್ಲಾ ವರ್ಗದ ರೈತರ ಮಕ್ಕಳು ರಾಜ್ಯದ ಇತರೆ ಯಾವುದೇ (SC/ST/OBC/Minority) ಶಿಷ್ಯ ವೇತನ ಪಡೆಯಲು ಆಗದಿದ್ದಲ್ಲಿ, ಅಂತಹ ರೈತರ ಮಕ್ಕಳು ಮೆಟ್ರಿಕ್-ನಂತರದ ಶಿಷ್ಯ ವೇತನಕ್ಕಾಗಿ ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ (https://ssp.postmatric.karnataka.gov.in) ಮುಖಾಂತರ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಕುರಿತು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಉಲ್ಲೇಖಿತ ಪತ್ರದಲ್ಲಿ ತಿಳಿಸಿದ್ದು, ಸದರಿ ಪತ್ರವನ್ನು ತಮ್ಮ ಕಾಲೇಜು/ವಿಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸಿ, ಕಾಲೇಜು/ವಿಭಾಗದ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ತಿಳಿಸಲಾಗಿದೆ.

(ಕರಡು ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ)

ಕುಲಸಚಿವರ ಪರವಾಗಿ

ರಿಗೆ,

1) ಎಲ್ಲಾ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು /ಸಂಯೋಜಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2) ನಿರ್ದೇಶಕರು (ಪ್ರಭಾರ), ಜ್ಞಾನಕಾವೇರಿ, ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ.
3) ಪ್ರಾಂಶುಪಾಲರು, ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ಘಟಕ/ಸಂಯೋಜಿತ/ಸ್ವಾಯತ್ತ ಕಾಲೇಜುಗಳು.

ಪ್ರತಿ: 1) ಹಣಕಾಸು ಅಧಿಕಾರಿಯವರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2) ಕುಲಸಚಿವರ ಆಪ್ತ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.

ಜಿ. ಕುಮಾರ ನಾಯಕ, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
G. KUMAR NAIK, I.A.S.,
Additional Chief Secretary to Government

ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ)
**Department of Education**
**(Higher Education)**

ಅ.ಸ. ಪತ್ರ ಸಂಖ್ಯೆ: ಇಡಿ/35/ಇಜಿಒವಿ/2021

ದಿನಾಂಕ: 04/11/2021

ಮಾನ್ಯರೆ,

ಸರ್ಕಾರದ ಆದೇಶ ಸಂಖ್ಯೆ: AGRI-AML/141/2021, ದಿನಾಂಕ:07.08.2021 ರಲ್ಲಿ ತಿಳಿಸಿದಂತೆ, ಬೆಂಗಳೂರು, ರೈತರ ಮಕ್ಕಳ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆಯನ್ನು ಜಾರಿಗೆ ತರಲು, ಯೋಜನೆ ರೂಪು ರೇಷೆಗಳನ್ನು ರಚಿಸಿ ಆದೇಶಿಸಲಾಗಿದೆ.

10ನೇ ತರಗತಿ ಪೂರ್ಣಗೊಳಿಸಿದ ನಂತರ ಕರ್ನಾಟಕ ರಾಜ್ಯದ ಯಾವುದೇ ಬಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು, ಸ್ವಾಯತ್ತ ಕಾಲೇಜುಗಳು, ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರುವ ಕರ್ನಾಟಕ ರಾಜ್ಯದ ರೈತರ ಮಕ್ಕಳ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer -DBT) ಪದ್ಧತಿಯ ಮೂಲಕ 2021-22ನೇ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ ಶಿಷ್ಯವೇತನ ಹಣದ ಮೊತ್ತವನ್ನು ಶಿಷ್ಯವೇತನ (Scholarship) ರೂಪದಲ್ಲಿ ಒದಗಿಸಲು ಅನುಮೋದನೆ ನೀಡಲಾಗಿದೆ.

ಅದರಂತೆ, ಈ ಶಿಷ್ಯವೇತನವನ್ನು ಕರ್ನಾಟಕ ರಾಜ್ಯದ ಎಲ್ಲಾ ವರ್ಗದ ರೈತರ ಮಕ್ಕಳು ರಾಜ್ಯದ ಇತರೆ ಯಾವುದೇ (SC/ST/OBC/Minority) ಶಿಷ್ಯ ವೇತನವನ್ನು ಪಡೆಯಲು ಆಗದಿದ್ದಲ್ಲಿ, ರೈತರ ಮಕ್ಕಳ ಶಿಷ್ಯ ವೇತನಕ್ಕೆ http://ssp.postmatric.karnataka.gov.in ಪೋರ್ಟಲ್ ಮುಖಾಂತರ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಈ ಸಂಬಂಧ ಪಾಲಿಟೆಕ್ನಿಕ್‌ಗಳು, ವಿಶ್ವವಿದ್ಯಾಲಯಗಳು ಮತ್ತು ವಿಶ್ವವಿದ್ಯಾಲಯಗಳಡಿಯ ಸ್ವಾಯತ್ತ ಕಾಲೇಜುಗಳಲ್ಲಿ ಅದ್ಯಯನ ಮಾಡುವ ಎಲ್ಲಾ ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆಯಲು ಪ್ರಚುರ ಪಡಿಸುವಂತೆ ಕೋರಲಾಗಿದೆ. (ಆದೇಶದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ).

881
6/11/21
Circular to all colleges/Dept.
AEC

ತಮ್ಮ ವಿಶ್ವಾಸಿ
[signature]

ಇವರಿಗೆ,
GEN
ಕುಲಸಚಿವರು,
ಎಲ್ಲಾ ಸಾರ್ವಜನಿಕ ಮತ್ತು ಖಾಸಗಿ ವಿಶ್ವವಿದ್ಯಾಲಯಗಳು.

9/11/21
Gib

6ನೇ ಮಹಡಿ, 2ನೇ ಗೇಟ್, ಬಹುಮಹಡಿ ಕಟ್ಟಡ, ಡಾ: ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು– 560 001
Room No. 645, 6th Floor, 2nd Gate, M.S. Building, Dr. B.R. Ambedkar Veedhi, Bengaluru - 560 001
E-mail : prshigh-edu@karnataka.gov.in Tel : +91-080-22252437, 22032494

ಪ್ರತಿ:

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಆಯುಕ್ತರು, ಕೃಷಿ ಇಲಾಖೆ, ಆನಂದ್ ರಾವ್ ಸರ್ಕಲ್, ಬೆಂಗಳೂರು.
3. ಜಂಟಿ ಕಾರ್ಯದರ್ಶಿಗಳು, ವಿಶ್ವವಿದ್ಯಾಲಯ ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
4. ಪ್ರಾಂಶುಪಾಲರು, ಪಾಲಿಟೆಕ್ನಿಕ್ ಮತ್ತು ಸಾರ್ವಜನಿಕ ಮತ್ತು ಖಾಸಗಿ ವಿಶ್ವವಿದ್ಯಾಲಯಗಳಡಿಯ ಸ್ವಾಯತ್ತ ಪದವಿ ಕಾಲೇಜುಗಳು, ಕರ್ನಾಟಕ ಸರ್ಕಾರ.
5. ವಿಶೇಷಾಧಿಕಾರಿಗಳು, ಇ-ಆಡಳಿತ ಘಟಕ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಇ-ಆಡಳಿತ ಇಲಾಖೆ, ಬೆಂಗಳೂರು.

E.No. 6674
SSP